**All India Radio: Bangalore**
**National Bulletin In Kannada**
**07.03.2025 13.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**07.03.2025 13.10 p.m.**

**<><><><>**

ಮುಖ್ಯಾಂಶಗಳು

1. ೨೦೨೫-೨೬ರ ಕರ್ನಾಟಕ ರಾಜ್ಯ ಆಯವ್ಯಯ ಮಂಡಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ
2. ಸಿಲ್ವಾಸಾದಲ್ಲಿಂದು ಪ್ರಧಾನಿ ನರೇಂದ್ರ ಮೋದಿ ಅವರಿಂದ ೪೫೦ ಹಾಸಿಗೆ ಸಾಮರ್ಥ್ಯದ ನಮೋ ಆಸ್ಪತ್ರೆಯ ಮೊದಲ ಹಂತ ಉದ್ಘಾಟನೆ
3. ಮೈಸೂರು ಆಕಾಶವಾಣಿಗೆ ೯೦ ವರ್ಷ; ಸೈಕಲ್ ಜಾಥಾಗೆ ಚಾಲನೆ ನೀಡಿದ ದೆಹಲಿ ಆಕಾಶವಾಣಿ ಸುದ್ದಿ ವಿಭಾಗ ಮಹಾನಿರ್ದೇಶಕರಾದ ಡಾ.ಪ್ರಜ್ಞಾ ಪಾಲಿವಾಲ್ ಗೌರ್
4. ಓರ್ಲಿಯನ್ಸ್ ಮಾಸ್ಟರ್ಸ್ ಸೂಪರ್ ೩೦೦ ಬ್ಯಾಡ್ಮಿಂಟನ್; ಪುರುಷರ ಸಿಂಗಲ್ಸ್ ವಿಭಾಗದಲ್ಲಿ ಭಾರತದ ಆಯುಷ್ ಶೆಟ್ಟಿ ಕ್ವಾರ್ಟರ್ ಫೈನಲ್ಸ್ ಪ್ರವೇಶ

<><><><>

ಮುಖ್ಯಮಂತ್ರಿ ಸಿದ್ದರಾಮಯ್ಯ ೨೦೨೫-೨೬ನೇ ಸಾಲಿನ ೪ ಲಕ್ಷದ ೯ ಸಾವಿರದ ೫೪೯ ಬಜೆಟ್ ಗಾತ್ರದ ಕರ್ನಾಟಕ ರಾಜ್ಯ ಆಯವ್ಯಯವನ್ನು ಇಂದು ಮಂಡಿಸಿದ್ದಾರೆ. ಕೃಷಿ ಮತ್ತು  ಇನ್ನಿತರ ದಾಖಲೀಕರಣ, ಮೂಲಸೌಕರ್ಯ ಒದಗಿಸುವಿಕೆ, ಸಮರ್ಪಕ ವಿದ್ಯುತ್ ಪೂರೈಕೆ, ಗೋದಾಮುಗಳ ಒದಗಿಸುವಿಕೆ ಮುಂತಾದ ಚಟುವಟಿಕೆಗಳ ಮೂಲಕ ಗ್ರಾಮಗಳ ಅಭಿವೃದ್ದಿಗೆ ಮತ್ತು ಗ್ರಾಮೀಣ ಜನರ ಆದಾಯ ಹೆಚ್ಚಿಸಲು ಶ್ರಮಿಸಲಾಗುವುದು ಎಂದು ಮುಖ್ಯಮಂತ್ರಿ ಬಜೆಟ್ ಭಾಣದಲ್ಲಿ ತಿಳಿಸಿದ್ದಾರೆ. ೨೦೨೪-೨೫ರಲ್ಲಿ ಶೇಕಡ ೪ರಷ್ಟು ಬೆಳವಣಿಗೆ ಸಾಧಿಸುವ ಮೂಲಕ ಚೇತರಿಕೆ ಕಂಡಿದ್ದು, ದೇಶದ ಕೃಷಿ ವಲಯದ ಬೆಳವಣಿಗೆ ಶೇಕಡ ೩.ಲಕ್ಕಿಂತ ಹೆಚ್ಚಾಗಿದೆ. ರಾಜ್ಯ ಸರ್ಕಾರವು ರೈತರ ಕಲ್ಯಾಣ ಉದ್ದೇಶಿತ ಯೋಜನೆಗಳಿಗೆ ಪ್ರಸಕ್ತ ವರ್ಷದಲ್ಲಿ ಒಟ್ಟು ೫೧ ಸಾವಿದ ೩೩೯ ಕೋಟಿ ರೂಪಾಯಿ ಅನುದಾನವನ್ನು ನೀಡಲಾಗಿದೆ. ಪ್ರಸಕ್ತ ಹಣಕಾಸು ವರ್ಷದಲ್ಲಿ ಗ್ಯಾರಂಟಿ ಯೋಜನೆಗಳಿಗಾಗಿ ೫೧ ಸಾವಿರದ ೩೪ ಕೋಟಿ ರೂಪಾಯಿ ಒದಗಿಸಲಾಗಿದೆ. ೨೦೨೫-೨೬ನೇ

ಸಾಲಿನಲ್ಲಿ ರಾಜ್ಯದಲ್ಲಿ ಕೃಷಿ ಯಾಂತ್ರೀಕರಣ ಕಾರ್ಯಕ್ರಮದಡಿ ೫೦ ಸಾವಿರ ರೈತರಿಗೆ ಸಹಾಯಧನ ಒದಗಿಸಲು ೪೨೮ ಕೋಟಿ ರೂಪಾಯಿ ಅನುದಾನ ಕಲ್ಪಿಸಲಾಗುವುದು ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ.

ಧ್ವನಿ : ಸಿದ್ದರಾಮಯ್ಯ

ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಅತಿಥಿ ಶಿಕ್ಷಕರು ಮತ್ತು ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಅತಿಥಿ ಉಪನ್ಯಾಸಕರಿಗೆ ಪ್ರಸ್ತುತ ನೀಡಲಾಗುತ್ತಿರುವ ಮಾಸಿಕ ಗೌರವಧನವನ್ನು ತಲಾ ೨ ಸಾವಿರ ರೂಪಾಯಿಗೆ ಹೆಚ್ಚಿಸಲಾಗುವುದು. ಸರ್ಕಾರಿ ಶಾಲೆಗಳಲ್ಲಿ ಬಿಸಿಯೂಟ ತಯಾರಿಸುವ ಸಿಬ್ಬಂದಿಗೆ ನೀಡುತ್ತಿರುವ ಮಾಸಿಕ ಗೌರವಧನವನ್ನು ತಲಾ ೧ ಸಾವಿರ ರೂಪಾಯಿಗೆ ಏರಿಸಲಾಗುವುದು. ರಾಜ್ಯದಲ್ಲಿ ತಡೆಗಟ್ಟಬಹುದಾದ ತಾಯಿ ಮರಣ ಪ್ರಮಾಣವನ್ನು ಶೂನ್ಯಕ್ಕೆ ಇಳಿಸಲು ಅಭಿಯಾನ ರೂಪದಲ್ಲಿ ಕ್ರಮ ಕೈಗೊಳ್ಳಲು ೩೨೦ ಕೋಟಿ ರೂಪಾಯಿ ಒದಗಿಸಲಾಗಿದೆ. ಬೆಂಗಳೂರು ಉತ್ತರ ತಾಲ್ಲೂಕಿನ ವ್ಯಾಪ್ತಿಯಲ್ಲಿ ೨೦೦ ಹಾಸಿಗೆಯ ಅತ್ಯಾಧುನಿಕ ಮತ್ತು ಸುಸಜ್ಜಿತ ಆಸ್ಪತ್ರೆಯನ್ನು ೧೫೦ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾಗುವುದು. ರಾಜ್ಯದ ರಸ್ತೆ ಮತ್ತು ಮೂಲಸೌಕರ್ಯ ಅಭಿವೃದ್ಧಿಗಾಗಿ ೮ ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ ಮುಖ್ಯಮಂತ್ರಿ ಮೂಲ ಸೌಕರ್ಯ ಅಭಿವೃದ್ಧಿ ಕಾರ್ಯಕ್ರಮ ಜಾರಿಗೊಳಿಸಲಾಗುವುದು. ಎತ್ತಿನಹೊಳೆಯ ಯೋಜನೆಯಿಂದ ತುಮಕೂರು ಜಿಲ್ಲೆಯ ಮಧುಗಿರಿ ತಾಲ್ಲೂಕಿನ ೪೫ ಕೆರೆಗಳನ್ನು ಹಾಗೂ ಕೊರಟಗೆರೆ ತಾಲ್ಲೂಕಿನ ೬೨ ಕೆರೆಗಳನ್ನು ತುಂಬಿಸಿ ಅಂತರ್ಜಲ ಹೆಚ್ಚಿಸುವ ಯೋಜನೆಯನ್ನು ೫೫೩ ಕೋಟಿ ರೂಪಾಯಿ ಮೊತ್ತದಲ್ಲಿ ಅನುಷ್ಠಾನಗೊಳಿಸಲು ಕ್ರಮವಹಿಸಲಾಗುವುದು. ವಿದ್ಯಾರ್ಥಿಗಳು ಭವಿಷ್ಯದಲ್ಲಿ ಸೂಕ್ತ ವೃತ್ತಿಯನ್ನು ಆಯ್ಕೆ ಮಾಡಿಕೊಳ್ಳಲು ಮಾರ್ಗದರ್ಶನವನ್ನು ಒದಗಿಸಲು 'ನನ್ನ ವೃತ್ತಿ, ನನ್ನ ಆಯ್ಕೆ' ಕಾರ್ಯಕ್ರಮದಡಿ ಸರ್ಕಾರಿ ಶಾಲಾ/ಕಾಲೇಜುಗಳಲ್ಲಿನ ೨.೩೦ ಲಕ್ಷ ವಿದ್ಯಾರ್ಥಿಗಳಿಗೆ ವೃತ್ತಿಮಾರ್ಗದರ್ಶನ ನೀಡಲಾಗುವುದು. ಸೌರಶಕ್ತಿಯನ್ನು ಬಳಸಿ ಗ್ರಾಮ ಪಂಚಾಯಿತಿಗಳ ವಿದ್ಯುತ್ ಬಿಲ್ಲಿನ ಹೊರೆಯನ್ನು ತಗ್ಗಿಸಲು ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ ಸೋಲಾರ್ ಮೈಕ್ರೋ-ಗ್ರಿಡ್‌ಗಳನ್ನು ಸ್ಥಾಪಿಸಲಾಗುವುದು. ಬೆಂಗಳೂರನ್ನು ಅಂತಾರಾಷ್ಟ್ರೀಯ ಆರೋಗ್ಯ ಮಾನದಂಡಗಳ ನಗರವನ್ನಾಗಿ ಮಾಡಲು, ಬ್ರ್ಯಾಂಡ್ ಬೆಂಗಳೂರು ಅಭಿಯಾನದ ಅಡಿಯಲ್ಲಿ ಮುಂದಿನ ಮೂರು ವರ್ಷಗಳಲ್ಲಿ ೪೧೩ ಕೋಟಿ ರೂಪಾಯಿ ವೆಚ್ಚದಲ್ಲಿ ಸಮಗ್ರ ಆರೋಗ್ಯ ಯೋಜನೆಯನ್ನು

ಜಾರಿಗೊಳಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಮುಗಡಪತ್ರ ಭಾಷಣದಲ್ಲಿ ಘೋಷಿಸಿದ್ದಾರೆ.

<><><><>

ಬಜೆಟ್ ಕುರಿತ ಇನ್ನಷ್ಟು ಸಮಗ್ರ ಮಾಹಿತಿ ೨.೩೦ರ ಪ್ರದೇಶ ಸಮಾಚಾರ ಹಾಗೂ ಸಂಜೆ ೬.೪೦ರ ಪ್ರದೇಶ ಸಮಾಚಾರದಲ್ಲಿ ನೀಡಲಾಗುವುದು. ಬಜೆಟ್ ಕುರಿತ ಸಂವಾದ ರಾತ್ರಿ ೮ ಗಂಟೆಗೆ ಪ್ರಸಾರವಾಗಲಿದ್ದು, ಅತಿಥಿಗಳಾಗಿ ಆರ್ಥಿಕ ತಜ್ಞರಾದ ಶರಣ್ ಪಾಟೀಲ್ ಭಾಗವಹಿಸಲಿದ್ದಾರೆ. ಸಂವಾದವನ್ನು ಹಿರಿಯ ಪತ್ರಕರ್ತರಾದ ನಾರಾಯಣಸ್ವಾಮಿ ಬಿ.ಎಸ್. ನಡೆಸಿಕೊಡಲಿದ್ದಾರೆ.

<><><><>

ಮೈಸೂರು ಆಕಾಶವಾಣಿ ಕೇಂದ್ರ ಸ್ಥಾಪನೆಗೊಂಡು ೯೦ ವರ್ಷ ಪೂರೈಸಿರುವ ಹಿನ್ನೆಲೆಯಲ್ಲಿ ಮೈಸೂರಿನ ಯಾದವಗಿರಿಯಲ್ಲಿರುವ ಆಕಾಶವಾಣಿ ಕಚೇರಿಯ ಆವರಣದಲ್ಲಿಂದು ನುಡಿ ನಾದ ಸಂಗಮ ಎಂಬ ಹೆಸರಿನಡಿ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಇಂದು ಬೆಳಗ್ಗೆ ನಗರದ ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನ ಮುಂಭಾಗದಿಂದ ಆಕಾಶವಾಣಿ ಕಚೇರಿಯ ವರೆಗೆ ಸೈಕಲ್ ಜಾಥಾ ಏರ್ಪಡಿಸಲಾಗಿತ್ತು. ನವದೆಹಲಿಯ ಆಕಾಶವಾಣಿ ಸುದ್ದಿ ವಿಭಾಗದ ಮಹಾನಿರ್ದೇಶಕರಾದ ಡಾ. ಪ್ರಜ್ಞಾ ಪಾಲಿವಾಲ್ ಗೌರ್ ಈ ಜಾಥಾಗೆ ಹಸಿರು ನಿಶಾನೆ ತೋರಿದರು. ಬಳಿಕ ಮಾತನಾಡಿದ ಅವರು, ಆರೋಗ್ಯವಂತ ಸಮಾಜದ ನಿರ್ಮಾಣವನ್ನು ಉತ್ತೇಜಿಸುವ, ಫಿಟ್ ಇಂಡಿಯಾ ಅಭಿಯಾನದೊಂದಿಗೆ ಹೊಂದಾಣಿಕೆಯಾಗುವ ಸೈಕಲ್ ಜಾಥಾದೊಂದಿಗೆ ಮೈಸೂರು ಆಕಾಶವಾಣಿಯ ೯೦ ನೇ ವಾರ್ಷಿಕೋತ್ಸವದ ಆಚರಣೆಗೆ ಚಾಲನೆ ನೀಡಲಾಗಿದೆ. ಆಕಾಶವಾಣಿ ಎಂದಿಗೂ ಜನರ ಭಾಗವಹಿಸುವಿಕೆಯನ್ನು ಉತ್ತೇಜಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತದೆ. ಹಾಗೂ ಈ ಜಾಥಾ ಅದರ ಪ್ರತಿಬಿಂಬವಾಗಿದೆ ಎಂದರು. ಎಫ್‌ಎಂ ಗಳ ಮೂಲಕ ಮಾತ್ರವಲ್ಲದೇ ಸಾಮಾಜಿಕ ಮಾಧ್ಯಮಗಳ ಮೂಲಕ ಆಕಾಶವಾಣಿಯ ಕಾರ್ಯಕ್ರಮಗಳನ್ನು ಹೆಚ್ಚಿನ ಜನರಿಗೆ ತಲುಪಿಸಲಾಗುತ್ತಿದೆ. ಆ ಮೂಲಕವೂ ಹೆಚ್ಚಿನ ಜನರ ಪಾಲ್ಗೊಳ್ಳುವಿಕೆಯನ್ನು ಖಚಿತಪಡಿಸಲಾಗುತ್ತಿದೆ ಎಂದರು.

ಧ್ವನಿ: ಪ್ರಜ್ಞಾ ಪಾಲೀವಾಲ್ ಗೌರ್

ಕೋಟೆ ಆಂಜನೇಯ ದೇವಸ್ಥಾನದಿಂದ ಆಕಾಶವಾಣಿ ಕಚೇರಿಯ ವರೆಗೆ ನಗರದ ಪ್ರಮುಖ ಸ್ಥಳಗಳಲ್ಲಿ ಸಂಚರಿಸಿದ ಜಾಥಾದಲ್ಲಿ ನೂರಾರು ಸಂಖ್ಯೆಯಲ್ಲಿ ಆಕಾಶವಾಣಿ ಅಭಿಮಾನಿಗಳು

ಭಾಗವಹಿಸಿದ್ದರು. ಕಾರ್ಯಕ್ರಮದಲ್ಲಿ ಮೈಸೂರು ಜಿಲ್ಲಾ ಅಪರ ಜಿಲ್ಲಾಧಿಕಾರಿ ಡಾ ಪಿ ಶಿವರಾಜು, ಮೈಸೂರು ಆಕಾಶವಾಣಿ ಉಪ ನಿರ್ದೇಶಕ ಹಾಗೂ ಮುಖ್ಯಸ್ಥರಾದ ಎಸ್ ಎಸ್ ಉಮೇಶ್, ಸಹಾಯಕ ನಿರ್ದೇಶಕ ಟಿ.ವಿ.ವಿದ್ಯಾಶಂಕರ್ ಸೇರಿದಂತೆ ಮತ್ತಿತರರು ಭಾಗಿಯಾಗಿದ್ದರು.

<><><>

ಪ್ರಧಾನಿ ನರೇಂದ್ರ ಮೋದಿ ಅವರು ಇಂದಿನಿಂದ ಎರಡು ದಿನಗಳ ಭೇಟಿಗಾಗಿ ಗುಜರಾತ್ ಹಾಗೂ ಕೇಂದ್ರಾಡಳಿತ ಪ್ರದೇಶಗಳಾದ ದಾದ್ರಾ ಮತ್ತು ನಗರ ಹವೇಲಿ ಮತ್ತು ದಮನ್ ಹಾಗೂ ದಿಯುಗೆ ಪ್ರವಾಸ ಕೈಗೊಳ್ಳಲಿದ್ದಾರೆ. ತಮ್ಮ ಭೇಟಿಯ ವೇಳೆ ಅವರು, ಗುಜರಾತ್‌ನ ಸೂರತ್ ಮತ್ತು ನವಸಾರಿ ಮತ್ತು ದಮನ್‌ನ ಸಿಲ್ವಾಸಾದಲ್ಲಿ ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ದಾದ್ರಾ-ನಗರಹವೇಲಿಯ ಸಿಲ್ವಾಸಾ ಹಾಗೂ ದಮನ್-ದಿಯುನಲ್ಲಿರುವ ನಮೋ ಆಸ್ಪತ್ರೆಯ ಮೊದಲ ಹಂತವನ್ನು ಉದ್ಘಾಟಿಸಲಿದ್ದಾರೆ. ೪೬೦ ಕೋಟಿ ರೂಪಾಯಿಗಳಿಗೂ ಹೆಚ್ಚು ವೆಚ್ಚದಲ್ಲಿ ನಿರ್ಮಿಸಲಾದ ಈ ೪೫೦ ಹಾಸಿಗೆಗಳ ಆಸ್ಪತ್ರೆಯು ಕೇಂದ್ರಾಡಳಿತ ಪ್ರದೇಶದಲ್ಲಿ ಆರೋಗ್ಯ ಸೇವೆಗಳನ್ನು ಗಮನಾರ್ಹವಾಗಿ ಬಲಪಡಿಸಲಿದೆ ಎಂದು ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ. ಭೇಟಿಯ ವೇಳೆ ಅವರು, ೨ ಸಾವಿರದ ೫೮೭ ಕೋಟಿ ರೂಪಾಯಿ ಮೌಲ್ಯದ ವಿವಿಧ ಯೋಜನೆಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಸಿಲ್ವಾಸಾದಲ್ಲಿ ಪ್ರಧಾನಿ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ನಂತರ ಪ್ರಧಾನಿ ಸೂರತ್‌ನಲ್ಲಿ 'ಸೂರತ್ ಆಹಾರ ಭದ್ರತಾ ಅಭಿಯಾನ'ವನ್ನು ಉದ್ಘಾಟಿಸಲಿದ್ದಾರೆ. ಸೂರತ್‌ನಲ್ಲಿ ಸುಮಾರು ೨ ಲಕ್ಷ ಫಲಾನುಭವಿಗಳು ಪ್ರಧಾನ ಮಂತ್ರಿ ಗರೀಬ್ ಕಲ್ಯಾಣ್ ಅನ್ನ ಯೋಜನೆಯ ಪ್ರಯೋಜನಗಳನ್ನು ಪಡೆಯಲಿದ್ದಾರೆ. ನಾಳೆಯ ಅಂತಾರಾಷ್ಟ್ರೀಯ ಮಹಿಳಾ ದಿನದ ಅಂಗವಾಗಿ ಪ್ರಧಾನಿ ನವಸಾರಿಯಲ್ಲಿ 'ಲಖ್ಪತಿ ದೀದಿ ಸಮ್ಮೇಳನ'ದಲ್ಲಿ ಭಾಗವಹಿಸಲಿದ್ದಾರೆ. ಪ್ರಧಾನಮಂತ್ರಿಯವರು ೨೫ ಸಾವಿರಕ್ಕೂ ಹೆಚ್ಚು ಸ್ವಸಹಾಯ ಗುಂಪುಗಳ ೨.೫ ಲಕ್ಷ ಮಹಿಳೆಯರಿಗೆ ೪೫೦ ಕೋಟಿ ರೂಪಾಯಿಗಳಿಗೂ ಹೆಚ್ಚಿನ ಆರ್ಥಿಕ ನೆರವನ್ನು ವಿತರಿಸಲಿದ್ದಾರೆ.

<><><>

ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರು ನಿನ್ನೆ ಐರ್ಲೆಂಡ್ ಅಧ್ಯಕ್ಷ ಮೈಕೆಲ್ ಡಿ. ಹಿಗ್ಗಿನ್ಸ್ ಅವರನ್ನು ಭೇಟಿ ಮಾಡಿದರು. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ಭಾರತ ಮತ್ತು

ಐರ್ಲೆಂಡ್ ನಡುವಿನ ಸಂಬಂಧಗಳನ್ನು ಬಲಪಡಿಸುವಲ್ಲಿ ಸಂಸ್ಕೃತಿಯ ಪಾತ್ರದ ಬಗ್ಗೆ ಚರ್ಚಿಸಲಾಗಿದೆ ಎಂದರು.

<><><><>

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ೨೦೨೭ ರವೇಳೆಗೆ ದೇಶವನ್ನು ವಿಶ್ವದ ಮೂರನೇ ಅತಿದೊಡ್ಡ ಆರ್ಥಿಕತೆಯನ್ನಾಗಿ ಮಾಡಲಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಪ್ರತಿಪಾದಿಸಿದ್ದಾರೆ. ತಮಿಳನಾಡಿನ ಥಕ್ಕೋಲಂನಲ್ಲಿ ನಡೆದ ಸಿಐಎಸ್‌ಎಫ್‌ನ ೫೬ನೇ ಸಂಸ್ಥಾಪನಾ ದಿನದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸಿಐಎಸ್‌ಎಫ್ ಎಂದಿಗೂ ದೇಶದ ಅಭಿವೃದ್ಧಿಯ ಭಾಗವಾಗಿದ್ದು, ದೇಶದ ಜನರನ್ನು ರಕ್ಷಿಸುವ ಮೂಲಕ ಪ್ರಮುಖ ಕೊಡುಗೆ ನೀಡುತ್ತಿದೆ ಎಂದು ಹೇಳಿದರು.

<><><><>

ಫ್ರಾನ್ಸ್‌ನಲ್ಲಿ ನಡೆಯುತ್ತಿರುವ ಓರ್ಲಿಯನ್ಸ್ ಮಾಸ್ಟರ್ಸ್ ಸೂಪರ್ ೩೦೦ ಬ್ಯಾಡ್ಮಿಂಟನ್ ಪಂದ್ಯಾವಳಿಯ ಪುರುಷರ ಸಿಂಗಲ್ಸ್ ವಿಭಾಗದಲ್ಲಿ ಭಾರತದ ಆಯುಷ್ ಶೆಟ್ಟಿ ಕ್ವಾರ್ಟರ್ ಫೈನಲ್ಸ್ ಪ್ರವೇಶಿಸಿದ್ದಾರೆ. ಇಂದು ಸಂಜೆ ನಡೆಯುವ ಕ್ವಾರ್ಟರ್ ಫೈನಲ್‌ನಲ್ಲಿ ಅವರು ಡೆನ್ಮಾರ್ಕ್‌ನ ರಾಸ್ಮಸ್ ಗೆಮ್ಕೆ ಅವರನ್ನು ಎದುರಿಸಲಿದ್ದಾರೆ. ವಿಶ್ವ ಶ್ರೇಯಾಂಕದಲ್ಲಿ ೪೮ ನೇ ಸ್ಥಾನದಲ್ಲಿರುವ ಶೆಟ್ಟಿ, ಪ್ರಿ-ಕ್ವಾರ್ಟರ್ ಫೈನಲ್‌ನಲ್ಲಿ ೨೧-೧೭, ೨೧-೧೭ ಅಂತರದಲ್ಲಿ ಹಾಂಗ್ ಕಾಂಗ್‌ನ ಜೇಸನ್ ಗುಣವಾನ್ ಅವರನ್ನು ಸೋಲಿಸಿದರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>